ಡಾ॥ ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ಸರಹದ್ದಿನ ತೂಬಗೆರೆ ಹೋಬಳಿಯ ಎಸ್.ಎಸ್.ಘಾಟಿ ಗ್ರಾಮದಲ್ಲಿ ಈಗಾಗಲೇ ಒಂದು ಪೊಲೀಸ್ ಹೊರಠಾಣೆ ಕಾರ್ಯನಿರ್ವಹಿಸುತ್ತಿದ್ದು, ಎಸ್.ಎಸ್.ಘಾಟಿ ಗ್ರಾಮವು ತೂಬಗೆರೆ ಹೋಬಳಿಯ ವ್ಯಾಪ್ತಿಯಲ್ಲಿರುವುದರಿಂದ ಈ ಗ್ರಾಮದಲ್ಲಿ ಮತ್ತೊಂದು ಪೊಲೀಸ್ ಹೊರಠಾಣೆ ತೆರೆಯುವ ಅವಶ್ಯಕತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ದೇವನಹಳ್ಳಿ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ

251 (315) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ತಾಲ್ಲೂಕು ಬಿಟ್ಟುಕೋಟೆ ಗ್ರಾಮದ ಕೆರೆಯಿಂದ ದೇವನಹಳ್ಳಿ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಯನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸ ಲಾಗುವುದು ಮತ್ತು ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಎಷ್ಟು ಸಮಯ ಬೇಕಾಗುವುದು;

ಇ) ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ದೇವನಹಳ್ಳಿ ಹಾಗೂ ವಿಜಯಪುರ ಪುರಸಭೆಗಳಿಗೆ ಸುಸಜ್ಜಿತ ತರಕಾರಿ ಮತ್ತು ಮಾಂಸದ ಮಾರುಕಟ್ಟೆ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಈ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು;

ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) – ಹೌದು –

ಆ) ಪ್ರಸಾವನೆಯನ್ನು ದಿನಾಂಕ:02.03.2010 ರಂದು ಪುರಸಭೆಯ ಸಾಮಾನ್ಯ ಸಭೆಯಲ್ಲಿ ಅನುಮೋದಿಸಲಾಗಿರುತ್ತದೆ. ಅದರಂತೆ ಯೋಜನೆಯ ಸರ್ವೆ ಕಾರ್ಯಕ್ಕಾಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ನಿಗದಿಪಡಿಸಿದ ಮೊತ್ತವನ್ನು ಸ್ಥಳೀಯ ಸಂಸ್ಥೆಯು

ಮಂಡಳಿಗೆ ಪಾವತಿಸಿದ ಕೂಡಲೇ ಅಂದಾಜು ಪಟ್ಟಿ ತಯಾರಿಸಿ, ಪ್ರಸ್ತಾವನೆಯನ್ನು ಆಡಳಿತಾತ್ಮಕ ಅನುಮೋದನೆಗೆ ಸರ್ಕಾರಕ್ಕೆ ಸಲ್ಲಿಸಿದ ನಂತರ, 3 ವರ್ಷಗಳೊಳಗಾಗಿ ಯೋಜನೆಯ ಕಾಮಗಾರಿಗಳನ್ನು ಪೂರೈಸಲಾಗುವುದು.

ಇ) ದೇವನಹಳ್ಳಿ – ಹೌದು.

ವಿಜಯಪುರ–ಪ್ರಸ್ತಾವನೆ ಇರುವುದಿಲ್ಲ. ಹಾಲಿ ಇರುವ ಹಳೆಯ ಮಾಂಸದ ಮತ್ತು ತರಕಾರಿ ಮಾರುಕಟ್ಟೆಯಲ್ಲಿಯೇ ಮುಂದುವರೆಯುತ್ತದೆ.

ಈ) ರಾಜ್ಯ ಹಣಕಾಸು ಯೋಜನೆಯಡಿಯಲ್ಲಿ (ಎಸ್.ಎಫ್.ಸಿ) ಸಂತೆ ಮೈದಾನದಲ್ಲಿ ತರಕಾರಿ ಹಾಗೂ ಮಾಂಸದ ಮಾರುಕಟ್ಟೆಯನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಆದರೆ ಸ್ಥಳ ಗುರುತಿಸಿರುವುದಿಲ್ಲ. ಸ್ಥಳ ನಿಗದಿಯಾದ ನಂತರ ಪ್ರಾರಂಭಿಸಲಾಗುವುದು.

ದೇವನಹಳ್ಳಿ ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆಯನ್ನು ನೀಗಿಸುವುದು

252 (316) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆಯನ್ನು ನೀಗಿಸಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿಕೊಂಡಿದೆ;

ಆ) ದೇವನಹಳ್ಳಿ ತಾಲ್ಲೂಕು, ಕುಂದಾಣ ಗ್ರಾಮದಲ್ಲಿ ಉದ್ದೇಶಿತ 66/11 ಕೆ.ವಿ. ವಿದ್ಯುತ್ ಉಪಕೇಂದ್ರ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಪ್ರಸ್ತುತ ದೇವನಹಳ್ಳಿ ತಾಲ್ಲೂಕಿನಲ್ಲಿ ದೇವನಹಳ್ಳಿ, ವಿದ್ಯಾನಗರ ಹಾಗೂ ವಿಜಯಪುರಗಳಲ್ಲಿ 66 ಕೆ.ವಿ. ವಿದ್ಯುತ್ ಉಪ ಕೇಂದ್ರಗಳು ಹಾಗೂ ಬೇಗೂರಿನಲ್ಲಿ 220 ಕೆ.ವಿ. ವಿದ್ಯುತ್ ಕೇಂದ್ರ ಕಾರ್ಯನಿರ್ವಹಿಸುತ್ತಿವೆ.